ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ.

(ಆ) ಇದ್ದಲ್ಲಿ, ಅಂತಹ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿವೆ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು)

ಸಿಂಧನೂರು ತಾಲ್ಲೂಕಿನಲ್ಲಿರುವ ಯಾವುದೇ ಕ್ಯಾಂಪ್‌ಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಉದ್ದೇಶ ಇರುವುದಿಲ್ಲ.

ಉದ್ಭವಿಸುವುದಿಲ್ಲ.

ವಿಷಯ : – ಸಿಂಧನೂರು ತಾಲ್ಲೂಕಿನಲ್ಲಿ ನೆರೆ ಹಾವಳಿಯಿಂದ ಹಾನಿಗೀಡಾದ್ದಕ್ಕೆ ಪುನರ್ವಸತಿ ಕಾರ್ಯಕ್ರಮದ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 382(522)

ಶ್ರೀ ಬಿ. ಹಂಪನಗೌಡ (ಸಿಂಧನೂರು)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

(ಆ) ಸಿಂಧನೂರು ತಾಲ್ಲೂಕಿನಲ್ಲಿ ಕಳೆದವರ್ಷ ನವೆಂಬರ್ ತಿಂಗಳಿನಲ್ಲಿ ನೆರೆ ಹಾವಳಿಯಿಂದ ಹಾನಿಗೀಡಾದ ಗ್ರಾಮಗಳ ಪುನರ್ವಸತಿ ಕಾರ್ಯಕ್ರಮ ಯಾವ ಹಂತದಲ್ಲಿದೆ?

(ಆ) ಇಲ್ಲಿಯವರೆಗೆ ಯಾವಯಾವ ಕೆಲಸಗಳನ್ನು ಪುನರ್‌ವಸತಿ ಕಾರ್ಯಕ್ರಮಗಳಲ್ಲಿ ಸೇರಿಸಿಕೊಳ್ಳಲಾಗಿದೆ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು)

ಸಿಂಧನೂರು ತಾಲ್ಲೂಕಿನಲ್ಲಿ 1992ರ ನವೆಂಬರ್ ತಿಂಗಳಿನಲ್ಲಿ ನೆರೆ ಹಾವಳಿಯಿಂದ ಹಾನಿಗೀಡಾದ ಆರು ಗ್ರಾಮಗಳಾದ, ಪುಲಮೇಶ್ವರದಿನ್ನಿ, ಚಿತ್ರಾಲಿ, ಹರಟನೂರು, ಹುಲಗುಂಟೆ, ಹೆಡಗಿನಾಳ್ ಮತ್ತು ಬಾದರ್ಲಿಗಳಲ್ಲಿ ಪುನರ್ವಸತಿ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಮೊದಲ ನಾಲ್ಕು ಗ್ರಾಮಗಳಲ್ಲಿ ಪುನರ್ವಸತಿಗಾಗಿ ಖಾಸಗಿಯವರಿಂದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಇನ್ನುಳಿದ ಹೆಡಗೀನಾಳ ಮತ್ತು ಬಾದರ್ಲಿ ಗ್ರಾಮಗಳ ಪುನರ್ವಸತಿಗಾಗಿ ಸರ್ಕಾರಿ ಭೂಮಿ ಲಭ್ಯವಿದೆ. ಬಾದರ್ಲಿ ಗ್ರಾಮದ ಪುನರ್ವಸತಿ ಪ್ರಸ್ತಾವನೆಯನ್ನು ಇನ್ನೂ ಅಂಗೀಕರಿಸಬೇಕಾಗಿದೆ. ಉಳಿದ ಗ್ರಾಮಗಳಲ್ಲಿ ನಿವೇಶನಗಳನ್ನು ರಚಿಸಿ ಸಂತ್ರಸ್ತರಿಗೆ ವಿತರಿಸಿದೆ. ಮೇಲೆ (ಆ)ನ ಉತ್ತರದಲ್ಲಿರುವ ಮೊದಲಿನ ಐದು ಗ್ರಾಮಗಳಲ್ಲಿ ನಿವೇಶನಗಳನ್ನು ಅಭಿವೃದ್ಧಿಗೊಳಿಸಿದೆ. ಇದಕ್ಕಾಗಿ ರೂ. 2.00 ಲಕ್ಷಗಳನ್ನು ವೆಚ್ಚ ಮಾಡಿದೆ. ವಿದ್ಯುತ್ ಸರಬರಾಜು ಮಾಡುವುದಕ್ಕಾಗಿ ವಿದ್ಯುತ್ ಮಂಡಲಿಗೆ ರೂ. 1.50 ಲಕ್ಷಗಳನ್ನು ಬಿಡುಗಡೆ ಮಾಡಿದೆ. ಕುಡಿಯುವ ನೀರಿನ ಪೂರೈಕೆಗಾಗಿ ರೂ. 0.50 ಲಕ್ಷಗಳನ್ನು ಖರ್ಚು ಮಾಡಲಾಗಿದೆ. ಒಟ್ಟು ರೂ.32.00 ಲಕ್ಷಗಳನ್ನು ಸಿಂಧನೂರು ತಾಲ್ಲೂಕಿನ ಗ್ರಾಮಗಳ ಪುನರ್ವಸತಿಗಾಗಿ ಬಿಡುಗಡೆ ಮಾಡಿದೆ.

ವಿಷಯ : – ರಾಯಚೂರು ಜಿಲ್ಲೆಯ ಬರಗಾಲ ಕಾಮಗಾರಿ ಕೆಲಸಗಳಿಗೆ ಸರ್ಕಾರ ಹಣ ಬಿಡುಗಡೆ ಮಾಡಿದ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 383(523)

ಶ್ರೀ ಬಿ. ಹಂಪನ ಗೌಡ (ಸಿಂಧನೂರು)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

(ಅ) ರಾಯಚೂರು ಜಿಲ್ಲೆಗೆ ಬರಗಾಲ ಕಾಮಗಾರಿ ಕೆಲಸಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು?

(ಆ) ಅದರಲ್ಲಿ ಎಷ್ಟು ಹಣ ಇಲ್ಲಿಯವರೆಗೆ ಖರ್ಚಾಗಿರುವುದು; (ತಾಲ್ಲೂಕುವಾರು ಮಾಹಿತಿ ನೀಡುವುದು)

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಸಚಿವರು)

ಪ್ರಸಕ್ತ ಹಣಕಾಸು ಸಾಲಿನಲ್ಲಿ ಸರ್ಕಾರವು 105.00 ಲಕ್ಷ ರೂಪಾಯಿಗಳನ್ನು ರಾಯಚೂರು ಜಿಲ್ಲೆಗೆ ಬರ ಪರಿಹಾರ ಕಾರ್ಯಕ್ರಮಗಳಿಗಾಗಿ ಬಿಡುಗಡೆ ಮಾಡಿದೆ.

61.13 ಲಕ್ಷ ರೂಪಾಯಿಗಳನ್ನು ಜಿಲ್ಲೆಯಲ್ಲಿ ಬರ ಪರಿಹಾರ ಕಾರ್ಯಕ್ರಮಗಳಿಗಾಗಿ ವೆಚ್ಚ ಮಾಡಲಾಗಿದೆ. ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿವೆ-

(ಲಕ್ಷ ರೂ.ಗಳಲ್ಲಿ)

	ತಾಲ್ಲೂಕಿನ ಹೆಸರು	ಖರ್ಚುಮಾಡಲಾದ ಹಣ
1	ರಾಯಚೂರು	5.60
2	ಮಾನ್ವಿ	5.07
3	ದೇವದುರ್ಗ	3.87
4	ಲಿಂಗಸುಗೂರು	15.48
5	ಸಿಂಧನೂರು	6.20
6	ಕುಷ್ಟಗಿ	5.75
7	ಕೊಪ್ಪಳ	7.44
8	ಗಂಗಾವತಿ	5.39
9	ಯಲಬುರ್ಗ	6.33
	ಒಟ್ಟು	61.13

ವಿಷಯ: - ಬೆಳಗಾವಿ ಜಿಲ್ಲೆಯಲ್ಲಿಯ ದೇವಸ್ಥಾನಗಳಿಗೆ ಜೀರ್ಣೋದ್ಧಾರಕ್ಕಾಗಿ ಮಂಜೂರು ಮಾಡಲಾದ ಹಣದ ಬಗ್ಗೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 384(464)

ಶ್ರೀ ಕೆ.ಸಿ. ಮೊಡಗೇಕರ್ ದೇಸಾಯಿ(ಬಾಗೇವಾಡಿ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) 1991-92 ಹಾಗೂ 1992-93ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿಯ ದೇವಸ್ಥಾನಗಳಿಗೆ ಜೀರ್ಣೋದ್ಧಾರಕ್ಕಾಗಿ ಹಾಗೂ ಕಲ್ಯಾಣಮಂಟಪ ಕಾಮಗಾರಿಗಳಿಗಾಗಿ ಧರ್ಮದತ್ತಿ ಇಲಾಖೆಯಿಂದ ಮಂಜೂರಾದ ಹಣ ಎಷ್ಟು (ತಾಲ್ಲೂಕುವಾರು ಮಾಹಿತಿ)

2) ಈ ಕಾಮಗಾರಿಗಳು ಯಾವ ಹಂತದಲ್ಲಿ ಇರುತ್ತವೆ, ಕಾಮಗಾರಿಗಳು ಪೂರ್ಣಗೊಳ್ಳದೇ ಇದ್ದಲ್ಲಿ ಅವುಗಳನ್ನು ಪೂರ್ಣಗೊಳಿಸಲು ಸರಕಾರಿ ಅನುದಾನ ಮಂಜೂರು ಮಾಡಲಾಗುವುದೋ ಹೇಗೆ?